# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 903 (1238)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ವಿಷಯ : ಕೃಷಿ ಭಾಗ್ಯ ಯೋಜನೆಯಡಿ ನಿರ್ಮಿಸಿರುವ ಕೃಷಿ ಹೊಂಡಗಳ ಮಾಹಿತಿ ಕುರಿತು

(ಅ) 2020-21ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯಡಿ ನಿರ್ಮಿಸಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸಹಾಯಧನ ಪಾವತಿಗೆ ಬಾಕಿಯಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ;

(ಇ) ರೈತರು ವಂತಿಕೆ ಪಾವತಿಸಿ ಪಾಲಿಥಿನ್ ಹೊದಿಕೆ ಅಳವಡಿಸಲು ಬಾಕಿ ಇರುವ ಹೊಂಡಗಳ ಸಂಖ್ಯೆ ಎಷ್ಟು ;

(ಈ) ಕೋವಿಡ್-19ರ ಅವಧಿಯಲ್ಲಿ ಮುಸುಕಿನ ಜೋಳ ಬೆಳೆದು ಸಂಕಷ್ಟಕ್ಕೆ ಈಡಾಗಿರುವ ರೈತರಿಗೆ ರೂ. 5000/-ಗಳ ಆರ್ಥಿಕ ನೆರವನ್ನು ಡಿ.ಬಿ.ಟಿ. ಮುಖಾಂತರ ನೀಡಲಾಗಿರುವ ರೈತರ ಸಂಖ್ಯೆ ಮತ್ತು ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಕೃಷಿ ಇಲಾಖೆಯಲ್ಲಿ ತಾಲ್ಲೂಕುವಾರು ಮಂಜೂರಾಗಿರುವ ಭರ್ತಿಯಾಗಿರುವ ಮತ್ತು ಖಾಲಿ ಇರುವ ಸಹಾಯಕ ಕೃಷಿ ಅಧಿಕಾರಿಗಳ ಮತ್ತು ಕೃಷಿ ಅಧಿಕಾರಿಗಳ ಹಾಗೂ ಸಹಾಯಕ ಕೃಷಿ ನಿರ್ದೇಶಕರುಗಳ ಸಂಖ್ಯೆ ಎಷ್ಟು ?